# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ. ಮಹೇಶ್ ಗಾವಡೆ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊಲನಗದ್ದೆ ಗ್ರಾಮ ಪಂಚಾಯಿತಿ, ಕುಮಟಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅಸಪ ಸಂಖ್ಯೆ: D.O.No. Compt/UPLOK / BGM- 4607 / 2015 / ARE-6. ದಿನಾಂಕ: 20.09.2016.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 12.09.2016 ರ ವರದಿಯಲ್ಲಿ ದೂರುದಾರರಾದ ಶ್ರೀ. ಸದಾನಂದ ಜಟ್ಟಿ, ಹರಿಕಾಂತ್ರ ಹೊಲನಗದ್ದೆ ಅಂಚೆ, ಕುಮಟಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ, ಇವರು ಶ್ರೀ. ಮಹೇಶ್ ಗಾವಡೆ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊಲನಗದ್ದೆ ಗ್ರಾಮ ಪಂಚಾಯಿತಿ, ಕುಮಟಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ, ಇವರ ವಿರುದ್ಧ ಲೋಕಾಯುಕ್ತ ಸಂಸ್ಥೆಗೆ ಸಲ್ಲಿಸಿರುವ ದೂರಿನಲ್ಲಿ 2010–15 ರ ಅವಧಿಯಲ್ಲಿ ಸದರಿಯವರು ಹಲವಾರು ಅವ್ಯವಹಾರಗಳನ್ನು ಎಸಗಿರುತ್ತಾರೆಂದು ಅಪಾದಿಸಿದ್ದು, ಈ ಬಗ್ಗೆ ಲೋಕಾಯುಕ್ತ ಸಂಸ್ಥೆಯು ನಡೆಸಿದ ತನಿಖೆಯ ಅನುಸಾರ ಈ ಕೆಳಕಂಡ ಅಂಶಗಳು ಕಂಡುಬಂದಿವೆ ಎಂದು ತಿಳಿಸಿರುತ್ತಾರೆ.

1) 2010–15 ರ ಅವಧಿಯಲ್ಲಿ ನೀರು ಸರಬರಾಜಿಗೆ ಸಂಬಂಧಿಸಿದ ವಿವಿಧ ಕೆಲಸಗಾರರಿಗೆ ಪ್ರತ್ಯೇಕ ಚೆಕ್ ಮೂಲಕ ಪಾವತಿಸುವ ಬದಲು ಒಂದೇ ಚೆಕ್ ಮೂಲಕ ಪಾವತಿಸಲಾಗಿದೆ.

2) ಸಿ.ಆರ್.ಝೆಡ್ ನಿಂದ ಅನುಮತಿ ಪಡೆಯದೆ ಶ್ರೀ ಎಂ.ಎಂ. ಹೆಗಡೆ ಎನ್ನುವವರಿಗೆ ಗ್ರಾಮ ಪಂಚಾಯಿತಿಯಿಂದ ನಿರ್ಮಾಣದ ಅನುಮತಿ ನೀಡಲಾಗಿದೆ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ದಿನಾಂಕ:27–2–2015 ರ ಗ್ರಾಮ ಸಭಾ ನಡವಳಿಯನ್ನು ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯಿತಿ, ಕುಮಟಾ ತಾಲ್ಲೂಕು, ಇವರ ಗಮನಕ್ಕೆ ತಂದು ಅನುಮತಿಗೆ ಅವಕಾಶವಿಲ್ಲದಂತಹ ಗ್ರಾಮ ಪಂಚಾಯಿತಿಯ ನಡವಳಿ ಮತ್ತು ಸಿ.ಆರ್.ಝೆಡ್. ಪ್ರದೇಶದಲ್ಲಿ ನಿರ್ಮಾಣಕ್ಕೆ ಅವಕಾಶವಿಲ್ಲದಂತಹ ಅನುಮತಿಯ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 237 ರ ಅಡಿ ಕ್ರಮ ತೆಗೆದುಕೊಳ್ಳಲು ಅವಕಾಶ ಒದಗಿಸುವಲ್ಲಿ ವಿಫಲವಾಗಿರುತ್ತಾರೆ.

ಈ ಹಿನ್ನೆಲೆಯಲ್ಲಿ ಶ್ರೀ. ಮಹೇಶ್ ಗಾವಡೆ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊಲನಗದ್ದೆ ಗ್ರಾಮ ಪಂಚಾಯಿತಿ, ಕುಮಟಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ, ಇವರು ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮಗಳು 3(1)(ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಭಾದ್ಯರಾಗಿರುತ್ತಾರೆಂದು ಕಂಡುಬಂದಿದ್ದರಿಂದ, ಅವರ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/628/ಗ್ರಾಪಂಕಾ/2016 ಬೆಂಗಳೂರು, ದಿನಾಂಕ-20-03-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ. ಮಹೇಶ್ ಗಾವಡೆ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊಲನಗದ್ದೆ ಗ್ರಾಮ ಪಂಚಾಯಿತಿ, ಕುಮಟಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉತ್ತರ ಕನ್ನಡ ಜಿಲ್ಲೆ, ಕಾರವಾರ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕುಮಟಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ,
6. ಶ್ರೀ. ಮಹೇಶ್ ಗಾವಡೆ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊಲನಗದ್ದೆ ಗ್ರಾಮ ಪಂಚಾಯಿತಿ, ಕುಮಟಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ,
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.